ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಬಾಗಲಕೋಟೆ ಜಿಲ್ಲೆಯ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

1147 (1464) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಗಲಕೋಟೆ ಜಿಲ್ಲೆಯ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅಕ್ಷರಧಾಮ ಮಾದರಿಯಲ್ಲಿ ವಸ್ತುಸಂಗ್ರಹಾಲಯವನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ;

(ಆ) ಪೂರ್ಣವಾಗದೇ ಇದ್ದಲ್ಲಿ, ವಿಳಂಬವಾಗಿರುವುದಕ್ಕೆ ಕಾರಣಗಳೇನು;

(ಇ) ಈ ಯೋಜನೆಯ ಉಸ್ತುವಾರಿಗೆ ಕಲಾ ಸಂಶೋಧಕರನ್ನು ನೇಮಕ ಮಾಡಲಾಗಿದೆಯೇ ; ಇಲ್ಲವಾದಲ್ಲಿ, ನೇಮಕ ಮಾಡದೇ ಇರಲು ಕಾರಣಗಳೇನು ;

(ಈ) ಸದರಿ ಯೋಜನೆಗಾಗಿ ಎಷ್ಟು ಅನುದಾನವನ್ನು ನೀಡಲಾಗಿದೆ ;

(ಉ) ಪ್ರಸ್ತುತ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ?